# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಶಾಂತರಾಮ್ ಬುಡ್ನಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1220 |
| ಉತ್ತರಿಸಬೇಕಾದ ದಿನಾಂಕ | : | 18-03-2025 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ಬುಡಕಟ್ಟು ಜನಾಂಗದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು: (ಸಂಪೂರ್ಣ ಮಾಹಿತಿ ನೀಡುವುದು) | ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ದೊಡ್ಡ ಪ್ರಮಾಣದ ಆದಿವಾಸಿ ವಿವಿಧೋದ್ದೇಶ ಸಹಕಾರ ಸಂಘಗಳು (ಲ್ಯಾಂಪ್ಸ್), ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕುಗಳು (ಪಿಕಾರ್ಡ್ ಬ್ಯಾಂಕ್) ಗಳು ಹಾಗೂ ಜಿಲ್ಲಾ ಕೇಂದ್ರ ಸಹಕಾರ (ಡಿಸಿಸಿ) ಬ್ಯಾಂಕುಗಳ ಮೂಲಕ ಬುಡಕಟ್ಟು ಜನಾಂಗದ ರೈತರಿಗೆ ಈ ಕೆಳಕಂಡ ಬಡ್ಡಿ ಸಹಾಯಧನ ಯೋಜನೆಯ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>1) ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ / ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br>2) ರೂ.15.00 ಲಕ್ಷಗಳವರೆಗೆ ಮಧ್ಯಮಾವಧಿ/ ದೀರ್ಘಾವಧಿ ಕೃಷಿ ಸಾಲಗಳನ್ನು ಶೇ.3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ವಿತರಿಸುವ ಅಡಮಾನ ಸಾಲವನ್ನು ಶೇ.7ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ. |

| | | |
|---|---|---|
| | | 4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ಏಳು ಲಕ್ಷ ರೂ.ವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.<br><br>5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಅನುವಾಗುವಂತೆ ಗೋದಾಮು ನಿರ್ಮಿಸಲು ಬ್ಯಾಂಕುಗಳು ನೀಡುವ ರೂ.20.00 ಲಕ್ಷ ವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನೆ.<br><br>ಯೋಜನೆಯ ನಿಯಮಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |
| ಆ) | ಈ ಸಾಲ ಯೋಜನೆಗಳನ್ನು ಪಡೆಯಲು ಇರುವ ಮಾನದಂಡಗಳು ಮತ್ತು ನಿಯಮಗಳಾವುವು? (ಸಂಪೂರ್ಣ ಮಾಹಿತಿ ನೀಡುವುದು) | ರೈತರು ಈ ಯೋಜನೆಗಳ ಲಾಭ ಪಡೆಯಲು ಸಂಬಂಧಿಸಿದ ಪತ್ತಿನ ಸಹಕಾರ ಸಂಘಗಳಲ್ಲಿ ಅರ್ಜಿ ಸಲ್ಲಿಸಿ ಸಾಲ ಪಡೆಯಬಹುದಾಗಿದೆ.<br><br>ಸಾಲ ಪಡೆಯಲು ಇರುವ ಮಾನದಂಡಗಳು ಮತ್ತು ನಿಯಮಗಳನ್ನು **ಅನುಬಂಧದಲ್ಲಿ** ನೀಡಲಾಗಿದೆ. |

**ಸಂಖ್ಯೆ: ಸಿಒ 84 ಸಿಎಲ್‌ಎಸ್ 2025**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**

<u>ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1220 ಕ್ಕೆ ಅನುಬಂಧ-1</u>

<u>ಸಹಕಾರ ಇಲಾಖೆಯಿಂದ ಸಹಕಾರ ಸಂಘಗಳ ಮೂಲಕ ರೈತರಿಗೆ ನೀಡುವ ಬಡ್ಡಿ ಸಹಾಯಧನದ ಯೋಜನೆಯ ಮಾನದಂಡಗಳು ಹಾಗೂ ರೈತರು ಅನುಸರಿಬೇಕಾದ ನಿಯಮಗಳ ವಿವರ</u>

1. <u>ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ</u>

1. ಈ ಯೋಜನೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್, ಪಿಕಾರ್ಡ್ ಬ್ಯಾಂಕುಗಳು ಹಾಗೂ ಡಿಸಿಸಿ ಬ್ಯಾಂಕುಗಳು ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಮತ್ತು ರೂ.2.00 ಲಕ್ಷಗಳವರೆಗೆ ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲವನ್ನು ಶೂನ್ಯ ಬಡ್ಡಿದರ ಅನ್ವಯವಾಗುವಂತೆ ರೈತರಿಗೆ ವಿತರಿಸಬೇಕಿರುತ್ತದೆ.
2. ರೈತನ ಭೂಮಿ ಅಥವಾ ವಾಸ ಸ್ಥಳ ಇರುವ ಪ್ರಾಥಮಿಕ ಸಹಕಾರ ಸಂಘದಲ್ಲಿ ರೈತನು ಸಾಲಕ್ಕಾಗಿ ಅರ್ಜಿ ಸಲ್ಲಿಸಬೇಕು. ಸಂಘ ನಿಷ್ಕ್ರಿಯ ಆಗಿದ್ದಲ್ಲಿ ಸಂಬಂಧಿಸಿದ ಡಿಸಿಸಿ ಬ್ಯಾಂಕಿನಲ್ಲಿ ಅರ್ಜಿ ಸಲ್ಲಿಸಬೇಕು.
3. ರೈತನು ಸಾಲ ಪಡೆಯಲು ನೀಡುವ ಭೂ ದಾಖಲೆಗಳಲ್ಲಿ ಇತರೇ ಯಾವುದೇ ಬ್ಯಾಂಕಿನಿಂದ ಸಾಲ ಪಡೆದಿರಬಾರದು.
4. ಅಲ್ಪಾವಧಿ ಕೃಷಿ ಸಾಲ ವಿತರಿಸಲು ರೈತನು ಹೊಂದಿರುವ ಭೂಹಿಡುವಳಿಗೆ ಮತ್ತು ಬೆಳೆಯುವ ಬೆಳೆಗೆ, ರಾಜ್ಯ ತಾಂತ್ರಿಕ ಸಲಹಾ ಸಮಿತಿ ಪ್ರತೀ ಬೆಳೆಗೆ ನಿಗದಿ ಪಡಿಸಿದ ಸ್ಕೇಲ್ ಆಫ್ ಫೈನಾನ್ಸ್ ಪ್ರಕಾರ ಬೆಳೆ ಸಾಲದ ಗರಿಷ್ಟ ಮಿತಿಯಾದ ಕ್ರಮಿಕ ಪತ್ತಿನ ಮಿತಿ (NCL) ಗೆ ಸಂಬಂದಿಸಿದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಂದ ಅನುಮೋದನೆ ಪಡೆದಿರತಕ್ಕದ್ದು ಹಾಗೂ ಬೆಳೆ ವಿಮೆ ಒಳಗೊಂಡಂತೆ ಸದರಿ ಮಿತಿ ಅಥವಾ ರೂ.5.00 ಲಕ್ಷ ಯಾವುದು ಕಡಿಮೆಯೋ ಆ ಮಿತಿಗೆ ಮಾತ್ರ ಸಾಲ ದೊರೆಯುತ್ತದೆ.
5. ಸಂಘಗಳು ಹೆಚ್ಚಿನ ಪ್ರಮಾಣದ ಸಾಲ ವಿತರಿಸಿದ್ದರೂ ಸಹ ಶೂನ್ಯ ಬಡ್ಡಿ ದರ ರೂ.5 ಲಕ್ಷಗಳ ವರೆಗಿನ ಸಾಲಕ್ಕೆ ಅನ್ವಯವಾಗುತ್ತದೆ.
6. ರೈತನು ಪಡೆದ ಸಾಲವನ್ನು ಸಂಘವು ನಿಗದಿಪಡಿಸಿದ ಗಡುವು ದಿನಾಂಕ ಅಥವಾ ಒಂದು ವರ್ಷ ಇದರಲ್ಲಿ ಯಾವುದು ಕಡಿಮೆಯೋ ಆ ಅವಧಿಯಲ್ಲಿ ಮರುಪಾವತಿಸಿದಲ್ಲಿ ಮಾತ್ರ ಬಡ್ಡಿ ಸಹಾಯಧನ ಲಭ್ಯವಾಗುತ್ತದೆ.
7. ಜಿಲ್ಲಾ ಸಹಕಾರ ಬ್ಯಾಂಕುಗಳು ನಬಾರ್ಡ್ ನಿಂದ ದೊರೆಯುವ ಪುನರ್ಧನ ಮತ್ತು ತಮ್ಮ ಬಂಡವಾಳದ ಲಭ್ಯತೆ ಆಧರಿಸಿ ರೈತರಿಗೆ ಸಾಲ ಮಂಜೂರು ಮಾಡಲಾಗುತ್ತದೆ.

<u>2. 15.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು **ಶೇಕಡ** 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ.</u>

1. ಈ ಯೋಜನೆಯಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್, ಪಿಕಾರ್ಡ್ ಬ್ಯಾಂಕುಗಳು ಹಾಗೂ ಡಿಸಿಸಿ ಬ್ಯಾಂಕುಗಳು ರೂ. 15.00 ಲಕ್ಷಗಳವರೆಗಿನ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲವನ್ನು ಶೇ.3 ರ ಬಡ್ಡಿದಂ ಅನ್ವಯವಾಗುವಂತೆ ರೈತರಿಗೆ ವಿತರಿಸಿಬೇಕಿರುತ್ತದೆ.
2. ರೈತನ ಭೂಮಿ ಅಥವಾ ವಾಸ ಸ್ಥಳ ಇರುವ ಪ್ರಾಥಮಿಕ ಸಹಕಾರ ಸಂಘದಲ್ಲಿ ರೈತನು ಸಾಲಕ್ಕಾಗಿ ಅರ್ಜಿ ಸಲ್ಲಿಸಬೇಕು. ಸಂಘ ನಿಷ್ಕ್ರಿಯ ಆಗಿದ್ದಲ್ಲಿ ಸಂಬಂಧಿಸಿದ ಡಿಸಿಸಿ ಬ್ಯಾಂಕಿನಲ್ಲಿ ಅರ್ಜಿ ಸಲ್ಲಿಸಬೇಕು.
3. ರೈತನು ಸಾಲ ಪಡೆಯಲು ನೀಡುವ ಭೂ ದಾಖಲೆಗಳಲ್ಲಿ ಇತರೇ ಯಾವುದೇ ಬ್ಯಾಂಕಿನಿಂದ ಸಾಲ ಪಡೆದಿರಬಾರದು.
4. ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲ ವಿತರಿಸಲು ನಬಾರ್ಡ್ ನಿಗದಿಪಡಿಸಿದ ಯುನಿಟ್ ಕಾಸ್ಟ್ ಅನ್ವಯ ಮತ್ತು ಭದ್ರತೆಯ ಮೌಲ್ಯದನ್ವಯ ಸಾಲದ ಮಿತಿಯನ್ನು ನಿಗದಿಪಡಿಸಲಾಗುತ್ತದೆ ಮತ್ತು ಸಾಲಕ್ಕೆ ಡಿಸಿಸಿ ಬ್ಯಾಂಕುಗಳ ಸಾಲ ನಿಯಮಾವಳಿಗಳನ್ವಯ ಭದ್ರತೆ ಪಡೆಯಲಾಗುತ್ತದೆ.
5. ಸಂಘಗಳು ಹೆಚ್ಚಿನ ಪ್ರಮಾಣದ ಸಾಲ ವಿತರಿಸಿದ್ದರೂ ಸಹ ಶೇ.3 ರ ಬಡ್ಡಿ ದರ ರೂ.15 ಲಕ್ಷಗಳ ವರೆಗಿನ ಸಾಲಕ್ಕೆ ಅನ್ವಯವಾಗುತ್ತದೆ.
6. ರೈತನು ಪಡೆದ ಸಾಲವನ್ನು ಸಂಘವು ಗರಿಷ್ಟ 10 ವರ್ಷಗಳ ಅವಧಿಗೆ ನಿಗದಿಪಡಿಸಿದ ಗಡುವು ದಿನಾಂಕದೊಳಗೆ ಸಾಲ ಮರುಪಾವತಿಸಿದಲ್ಲಿ ಮಾತ್ರ ಬಡ್ಡಿ ಸಹಾಯಧನ ಲಭ್ಯವಾಗುತ್ತದೆ.
7. ಜಿಲ್ಲಾ ಸಹಕಾರ ಬ್ಯಾಂಕುಗಳು ಹಾಗೂ ಪಿಕಾರ್ಡ್ ಬ್ಯಾಂಕ್ ನಬಾರ್ಡ್ ನಿಂದ ದೊರೆಯುವ ಪುನರ್ಧನ ಮತ್ತು ತಮ್ಮ ಬಂಡವಾಳದ ಲಭ್ಯತೆ ಆಧರಿಸಿ ರೈತರಿಗೆ ಸಾಲ ಮಂಜೂರು ಮಾಡಲಾಗುತ್ತದೆ.

—2

3. ಅಡಮಾನ ಸಾಲ

1. ರೈತನು ಸಂಘದ ಸದಸ್ಯನಾಗಿರತ್ತಕ್ಕದ್ದು.
2. ರೈತನ ಭೂಮಿ ಅಥವಾ ವಾಸ ಸ್ಥಳ ಸಂಘದ ವ್ಯಾಪ್ತಿಯಲ್ಲಿರತಕ್ಕದ್ದು.
3. ರೈತನು ತನ್ನ ಕೃಷಿ ಉತ್ಪನ್ನಗಳನ್ನು ಸಹಕಾರ ಸಂಘಗಳ ಗೋದಾಮಿನಲ್ಲಿ ಶೇಖರಿಸಿಡತಕ್ಕದ್ದು.
4. ಶೇಖರಣೆ ಮಾಡಿದ ಕೃಷಿ ಉತ್ಪನ್ನದ ಶೇ.70 ರಷ್ಟು ಮೌಲ್ಯ ಅಥವಾ ರೂ.2.00 ಲಕ್ಷ ಇದರಲ್ಲಿ ಯಾವುದು ಕಡಿಮೆಯೋ ಆ ಮೊತ್ತದ ಸಾಲವನ್ನು ಶೇ.7 ರ ಬಡ್ಡಿ ದರದಲ್ಲಿ ಗರಿಷ್ಟ 6 ತಿಂಗಳ ಅವಧಿಗೆ ಪಡೆಯಬಹುದಾಗಿದೆ.
5. ಸರ್ಕಾರದಿಂದ ಶೇ.4.00 ರ ಬಡ್ಡಿ ಸಹಾಯಧನವನ್ನು ರೈತರ ಪರವಾಗಿ ಸಹಕಾರ ಸಂಘಗಳಿಗೆ ನೀಡಲಾಗುವುದು.

4. ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ (Pick-up Van) ಖರೀದಿಸಲು ಏಳು ಲಕ್ಷ ರೂ.ವರೆಗಿನ ಸಾಲವನ್ನು ಶೇ.4 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ

1. ಈ ಯೋಜನೆಯು ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ವ್ಯಾಪ್ತಿಯಲ್ಲಿ ಇರುವ ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳು ಅಂದರೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು, ಟಿಬೇಟಿಯನ್ ಸಹಕಾರ ಸಂಸ್ಥೆಗಳು, ಪಿಕಾರ್ಡ್ ಬ್ಯಾಂಕುಗಳು ರೈತರಿಗೆ ನೇರವಾಗಿ ಪಿಕ್ ಅಪ್ ವ್ಯಾನ್ ಖರೀದಿಸಲು ನೀಡುವ ಸಾಲಗಳಿಗೆ ಅನ್ವಯಿಸುತ್ತದೆ.
2. ಈ ಯೋಜನೆಯಲ್ಲಿ ಸಾಲ ಪಡೆಯಲು ರೈತರ ಸಾಗುವಳಿ ಭೂಮಿಯು ಗುಡ್ಡಗಾಡು ಪ್ರದೇಶದಲ್ಲಿರಬೇಕು, ಅಂದರೆ ರೈತರ ಹೊಲವು ಶೇ.15 ಕ್ಕಿಂತ ಹೆಚ್ಚಿನ ಸ್ಲೋಪ್ ಹೊಂದಿರಬೇಕು ಅಥವಾ ರೈತನ ಮನೆ, ತಾಲ್ಲೂಕು ಮಾರುಕಟ್ಟೆ ಮತ್ತು ಹೊಲದ ನಡುವಿನ ರಸ್ತೆಯು ಗುಡ್ಡದ ಪ್ರದೇಶಗಳನ್ನು ಹೊಂದಿರತಕ್ಕದ್ದು ಮತ್ತು ರೈತನ ಹೊಲದಲ್ಲಿ ಟ್ರಾಕ್ಟರ್ ನ್ನು ಬಳಸಿ ಉಳುಮೆ ಮಾಡದೇ ಇರಬೇಕು. ಗುಡ್ಡಗಾಡು ಪ್ರದೇಶಗಳ ಗ್ರಾಮಗಳನ್ನು ಡಿಸಿಸಿ ಬ್ಯಾಂಕುಗಳು ಜಿಲ್ಲಾಧಿಕಾರಿಯವರಿಂದ ಅನುಮೋದನೆ ಪಡೆದು ಸಂಬಂಧಿಸಿದ ಎಲ್ಲಾ ಸಹಕಾರ ಸಂಘಗಳಿಗೆ ಹಾಗೂ ಇಲಾಖಾ ಅಧಿಕಾರಿಗಳಿಗೆ ತಿಳಿಸತಕ್ಕದ್ದು. ಹಾಗೂ ಈ ಪ್ರದೇಶದಲ್ಲಿನ ಭೂಮಿ ಹೊಂದಿರುವ ರೈತರಿಗೆ ಮಾತ್ರ ಯೋಜನೆಯಲ್ಲಿ ಸಾಲ ವಿತರಿಸತಕ್ಕದ್ದು..
3. ಈ ಯೋಜನೆಯಲ್ಲಿನ ಜಿಲ್ಲೆಗಳಲ್ಲಿ ಭೂಮಿ ಹೊಂದಿರುವ ರೈತರಿಗೆ ಗರಿಷ್ಠ 1.75 ಟನ್ ಸಾಗಾಣಿಕೆ ಸಾಮರ್ಥ್ಯದ, ಗರಿಷ್ಟ 3 ಸೀಟರ್ ಹೊಂದಿರುವ ನಾಲ್ಕು ಚಕ್ರದ ಪಿಕ್ ವ್ಯಾನ್ ಖರೀದಿಸಲು ಈ ಜಿಲ್ಲೆಗಳ ಸಹಕಾರ ಸಂಘಗಳು ಗರಿಷ್ಟ ರೂ.7.00 ಲಕ್ಷಗಳ ವರೆಗೆ ನೀಡುವ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ.
4. ಪ್ಯಾಕ್ಸ್ ಮತ್ತು ಪಿಕಾರ್ಡ್ ಬ್ಯಾಂಕುಗಳು ಗರಿಷ್ಟ ಶೇ.11 ರ ಬಡ್ಡಿ ದರ ಮತ್ತು ಡಿಸಿಸಿ ಬ್ಯಾಂಕುಗಳು ಗರಿಷ್ಟ 10 ರ ಬಡ್ಡಿ ದರದಲ್ಲಿ ಸಾಲ ವಿತರಿಸಬೇಕು.
5. ಪ್ರತೀ ಜಿಲ್ಲೆಯಲ್ಲಿ 100 ಫಲಾನುಭವಿಗಳಿಗೆ ಈ ಸೌಲಭ್ಯ ದೊರೆಯಲಿದೆ.
6. ರೈತರು ಪ್ರತೀ ಆರು ತಿಂಗಳಿಗೊಮ್ಮೆ ಗರಿಷ್ಟ 7 ವರ್ಷಗಳ ಅವಧಿಗೆ ಸಹಕಾರ ಸಂಘಗಳು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಸಾಲದ ಕಂತನ್ನು ಮರುಪಾವತಿಸಿದಲ್ಲಿ ಪ್ಯಾಕ್ಸ್ ಮತ್ತು ಪಿಕಾರ್ಡ್ ಬ್ಯಾಂಕುಗಳಿಗೆ ಶೇ.7 ಮತ್ತು ಡಿಸಿಸಿ ಬ್ಯಾಂಕುಗಳಿಗೆ ರೈತರ ಪರವಾಗಿ ಶೇ.6 ರ ಬಡ್ಡಿ ಸಹಾಯಧನ ದೊರೆಯುತ್ತದೆ. ಇದರಿಂದ ರೈತರಿಗೆ ಶೇ.4 ರ ಬಡ್ಡಿ ದರದಲ್ಲಿ ಸಾಲ ದೊರೆತಂತಾಗುತ್ತದೆ.

5. ರೈತರು ಗೋದಾಮು ನಿರ್ಮಿಸಲು ರೂ.20 ಲಕ್ಷಗಳ ವರೆಗೆ ಪಡೆದ ಸಾಲಗಳಿಗೆ ಶೇ.7 ರ ಬಡ್ಡಿ ಸಹಾಯಧನ ನೀಡುವುದು.

1. ಈ ಯೋಜನೆಯು ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳು ಅಂದರೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು, ಪಿಕಾರ್ಡ್ ಬ್ಯಾಂಕುಗಳು ರೈತರಿಗೆ ನೇರವಾಗಿ ಕೃಷಿ ಉತ್ಪನ್ನಗಳನ್ನು ಸಂಗ್ರಹಿಸುವ ಸಲುವಾಗಿ ಗೋದಾಮುಗಳನ್ನು ನಿರ್ಮಿಸಲು ನೀಡುವ ಸಾಲಗಳಿಗೆ ಅನ್ವಯಿಸುತ್ತದೆ.
2. ಈ ಯೋಜನೆಯಲ್ಲಿ ಪಡೆಯುವ ಸಾಲದಲ್ಲಿ ರೈತರು ಗ್ರಾಮೀಣ ಪ್ರದೇಶಗಳಲ್ಲಿರುವ ತಮ್ಮ ಗ್ರಾಮ ಪಂಚಾಯತಿ/ಪಟ್ಟಣ ಪಂಚಾಯತಿ ವ್ಯಾಪ್ತಿಯ ನಿವೇಶನಗಳಲ್ಲಿ ಅಥವಾ ಕೃಷಿ ಜಮೀನುಗಳಲ್ಲಿ Warehousing Development and Regulatory Authority / ನಬಾರ್ಡ್ ನಿಗದಿಪಡಿಸಿದ ವಿನ್ಯಾಸದನ್ವಯ ಗೋದಾಮು ನಿರ್ಮಿಸತಕ್ಕದ್ದು.

—3

3. ಈ ಯೋಜನೆಯಲ್ಲಿ ಸಹಕಾರ ಸಂಘಗಳು ಗರಿಷ್ಠ ರೂ.20.00 ಲಕ್ಷಗಳ ವರೆಗ ನೀಡಿದ ಸಾಲಗಳಿಗೆ ಬಡ್ಡಿ ಸಹಾಯಧನ ದೊರೆಯುತ್ತದೆ. ಸಹಕಾರ ಸಂಘಗಳು ರೂ.20.00 ಲಕ್ಷಕ್ಕಿಂತ ಹೆಚ್ಚಿನ ಸಾಲ ವಿತರಿಸಿದರೂ ಸಹ ಮೊದಲ ರೂ.20.00 ಲಕ್ಷಗಳ ವರೆಗಿನ ಸಾಲದ ಹೊರಬಾಕಿಗೆ ಬಡ್ಡಿ ಸಹಾಯಧನ ದೊರೆಯುತ್ತದೆ.
4. ಸಹಕಾರ ಸಂಘಗಳು ಗರಿಷ್ಠ ಶೇ.20 ರಷ್ಟು ವಂತಿಕೆಯನ್ನು ಮಾತ್ರ ಪಡೆದು ಉಳಿದ ಮೊತ್ತವನ್ನು ಸಾಲದ ರೂಪದಲ್ಲಿ ವಿತರಿಸತಕ್ಕದ್ದು. ಸಾಲದ ಮೊತ್ತಕ್ಕೆ ಗೋದಾಮು ಮತ್ತು ಭೂಮಿಯ ಮೌಲ್ಯ ಒಳಗೊಂಡಂತೆ 1.50 ರಷ್ಟು ಮಾತ್ರ ಭದ್ರತೆ ಪಡೆಯತಕ್ಕದ್ದು.
5. ಪ್ಯಾಕ್ಸ್ ಮತ್ತು ಪಿಕಾರ್ಡ್ ಬ್ಯಾಂಕುಗಳು ಗರಿಷ್ಠ ಶೇ.11 ರ ಬಡ್ಡಿ ದರ ಮತ್ತು ಡಿಸಿಸಿ ಬ್ಯಾಂಕುಗಳು ಗರಿಷ್ಠ 10 ರ ಬಡ್ಡಿ ದರದಲ್ಲಿ ಸಾಲ ವಿತರಿಸಬೇಕು.
6. ರೈತರು ಪ್ರತೀ ಆರು ತಿಂಗಳಿಗೊಮ್ಮೆ ಗರಿಷ್ಠ 7 ವರ್ಷಗಳ ಅವಧಿಗೆ ಸಹಕಾರ ಸಂಘಗಳು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಸಾಲದ ಕಂತನ್ನು ಮರುಪಾವತಿಸಿದಲ್ಲಿ ಪ್ಯಾಕ್ಸ್ ಮತ್ತು ಪಿಕಾರ್ಡ್ ಬ್ಯಾಂಕುಗಳಿಗೆ ಶೇ.7 ಮತ್ತು ಡಿಸಿಸಿ ಬ್ಯಾಂಕುಗಳಿಗೆ ರೈತರ ಪರವಾಗಿ ಶೇ.6 ರ ಬಡ್ಡಿ ಸಹಾಯಧನ ದೊರೆಯುತ್ತದೆ. ಇದರಿಂದ ರೈತರಿಗೆ ಶೇ.4 ರ ಬಡ್ಡಿ ದರದಲ್ಲಿ ಸಾಲ ದೊರೆತಂತಾಗುತ್ತದೆ.

ಸಹಕಾರ ಸಂಘಗಳ ಅಪರ ನಿಬಂಧಕರು
(ಪತ್ತು)